ಓ.ಎಸ್‌ಃ 403/2022

ಪಿ.ಡಬ್ಲ್ಯೂಃ 01

**<u>ದಿನಾಂಕಃ 17.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಲಾಯಿತು</u>**

**<u>ಮುಂದುವರೆದ ಪಾಟೀ ಸವಾಲು 1 ನೇ ಪ್ರತಿವಾದಿಯ ಪರ ಶ್ರೀ ಸಿ.ಆರ್.ಎಸ್. ವಕೀಲರಿಂದಃ</u>**

18. ನನ್ನ ತಂದೆ ಹೆಸರು ವೀರಭದ್ರಪ್ಪ, ನನ್ನ ತಾಯಿಯ ಹೆಸರು ಶಾಂತವ್ವ ನನ್ನ ಅಡ್ಡಹೆಸರು ಪವಾಡಶೆಟ್ಟಿ, ನನ್ನ ಊರು ಮಲ್ಲಾಪೂರ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಿದ್ದು ಸದರಿ ದಾಖಲಾತಿ ನನ್ನ ಶಾಲಾ ದಾಖಲಾತಿ ಆಗಿರುತ್ತದೆ, ಸಾಕ್ಷಿ ಅದನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಡಿ-1 ಎಂದು ಗುರುತಿಸಲಾಯಿತು. ನಾನು 9 ನೇ ತರಗತಿಯವೆರೆಗೆ ವಿದ್ಯಾಭ್ಯಾಸ ಮಾಡಿದ್ದು, ನನ್ನ ಕೇಸಿಗೆ ಅನುಕೂಲವಾಗಲೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸಾಕ್ಷಿಯು ನಿಡಿ-1 ಸುಳ್ಳು ದಾಖಲಾತಿ ಆಗಿರುತ್ತದೆ ಎಂದು ನುಡಿಯುತ್ತಾರೆ. ನಾನು ಯಾವುದೇ ದಾಖಲಾತಿಗೆ ಓದಿ ತಿಳಿದುಕೊಂಡು ಸಹಿ ಮಾಡುತ್ತೇನೆ.

19. ನಿಪಿ-1 ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸಾಕ್ಷಿಯು ನನಗೆ ಓದಲು ನೀಡಿರುವುದಿಲ್ಲ ಎಂದು ನುಡಿಯುತ್ತಾರೆ. ನಾನು ಪ್ರತಿವಾದಿಗೆ ನಿಪಿ-1 ರಂತೆ ದಾಖಲಾತಿಯನ್ನು ಬರೆದುಕೊಟ್ಟಿದ್ದು, ಹಣವನ್ನು ಪಡೆದುಕೊಂಡಿದ್ದರು ಸಹ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಅದೆ.**

**(ಶ್ರೀ ಅಮಿತ್ ಘಟ್ಟಿ)**

**ದಿವಾಣಿ ನ್ಯಾಯಾಧೀಶರು ಮತ್ತು**

**ನ್ಯಾಯಿಕ ದಂಡಾಧಿಕಾರಿಗಳು**

**ಬಸವನ ಬಾಗೇವಾಡಿ.**